ಸರ್ಕಾರದ ವಿವಿಧ ಇಲಾಖೆಗಳಲ್ಲಿ ಎಸ್‌ಸಿ/ಎಸ್‌ಟಿ ಯವರಿಗೆ ಮೀಸಲಾಗಿರುವ ಹುದ್ದೆಗಳನ್ನು ತುಂಬುವ ಬಗ್ಗೆ

3239 - ಶ್ರೀ ಕರಿಯಣ್ಣ (ಹೊಳೆಹೊನ್ನೂರು) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸರ್ಕಾರದ ವಿವಿಧ ಇಲಾಖೆಗಳಲ್ಲಿ ಎಸ್.ಸಿ/ಎಸ್.ಟಿ ಜನಾಂಗದವರಿಗೆ ವಿವಿಧ ಶೇಕಡ 18ಗಿಂತ ಕಡಿಮೆ ಇರುವ ಹುದ್ದೆಗಳ ಸಂಖ್ಯೆ ಎಷ್ಟು?*

ಆ) *ಇವುಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?*

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ಮೀಸಲಾತಿ ರೋಸ್ಟರಿನ ಪ್ರಕಾರ ಪ್ರತಿಯೊಂದು ನೇಮಕಾತಿ ಪ್ರಾಧಿಕಾರ, ಪ್ರತಿಯೊಂದು ನೇಮಕಾತಿಯ ಸಂದರ್ಭದಲ್ಲಿ ರಿಕ್ತ ಸ್ಥಾನಗಳನ್ನು ವರ್ಗೀಕರಿಸಿರುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗಾಗಿ ಮೀಸಲಿಡಲಾದ ರಿಕ್ತ ಸ್ಥಾನಗಳ ಸಂಖ್ಯೆ, ಅಂತಹ ವರ್ಗೀಕರಣದ ಮೇಲೆ ಅವಲಂಭಿಸಿರುತ್ತದೆ. ಇದೊಂದು ಸತತವಾದ ಪ್ರಕ್ರಿಯೆಯಾಗಿದೆ. ವರ್ಗೀಕರಿಸಿದ ರಿಕ್ತ ಸ್ಥಾನಗಳ ಬಗ್ಗೆ ಹಾಗೂ ಅವುಗಳು ಎಂದಿನಿಂದ ಖಾಲಿ ಇವೆ ಎನ್ನುವ ಬಗ್ಗೆ ಕೇಂದ್ರೀಕೃತ ಮಾಹಿತಿ ತಕ್ಷಣ ಲಭ್ಯವಿಲ್ಲ.

ಆ) ನೇರ ನೇಮಕಾತಿಗೆ ಸಂಬಂಧಿಸಿದಂತೆ, ಇತರೆ ವಿಷಯಗಳ ಜೊತೆಗೆ, ಸರ್ಕಾರದ ಪೂರ್ವಾನುಮೋದನೆ ಪಡೆದು, ಖಾಲಿ ಹುದ್ದೆಗಳನ್ನು ತುಂಬಲು ದಿನಾಂಕ 14.08.2000ರ ಆದೇಶ ಸಂಖ್ಯೆ ಸಿಆಸುಇ 56 ಸೆನೆಸಿ 2000ರಲ್ಲಿ ಆಸ್ಪದವನ್ನು ಕಲ್ಪಿಸಲಾಗಿದೆ. ಬಡ್ತಿಗೆ ಸಂಬಂಧಿಸಿದಂತೆ ಯಾವುದೇ ನಿಷೇಧ ಇಲ್ಲ ಹಾಗೂ ಬಡ್ತಿ ರಿಕ್ತ ಸ್ಥಾನಗಳನ್ನು ತುಂಬಬಹುದು.

ರಾಜಧಾನಿಯಲ್ಲಿರುವ I.A.S. ಅಧಿಕಾರಿಗಳಿಗೆ ಮತ್ತು ಇತರೆ ಇಲಾಖೆ ಮುಖ್ಯಸ್ಥರಿಗೆ ವಾಹನದ ಸವಲತ್ತು

3240 - ಶ್ರೀ ಕರಿಯಣ್ಣ (ಹೊಳೆಹೊನ್ನೂರು) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸರ್ಕಾರದ ರಾಜಧಾನಿಯಲ್ಲಿರುವ ಇಲಾಖೆಗಳ ಮುಖ್ಯಸ್ಥರಿಗೆ ಮತ್ತು ಐ.ಎ.ಎಸ್. ಅಧಿಕಾರಿಗಳಿಗೆ ಪ್ರತ್ಯೇಕವಾದ ವಾಹನಗಳನ್ನು ಒದಗಿಸಲಾಗಿದೆಯೇ? ಬೆಂಗಳೂರಿನಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು ಮತ್ತು ಇಲಾಖೆಯ ಎಲ್ಲಾ ಮುಖ್ಯಸ್ಥರಾದ ಐ.ಎ.ಎಸ್ ಮತ್ತು ಇತರೆ ಅಧಿಕಾರಿಗಳಿಗೆ ಒದಗಿಸಿರುವ ವಾಹನಗಳ ಸಂಖ್ಯೆ ಎಷ್ಟು?*

ಆ) *ಈ ಅಧಿಕಾರಿಗಳಿಗೆ ಸರ್ಕಾರದ ಖರ್ಚನ್ನು ಕಡಿಮೆ ಮಾಡಲು ಮಿನಿ ವಾಹನಗಳನ್ನು ಮಾಡಿ 5 ರಿಂದ 20 ಜನಗಳನ್ನು ಒಂದೇ ವಾಹನದಲ್ಲಿ ಕರೆದು ತರುವ ವ್ಯವಸ್ಥೆ ಮಾಡಲು ಕ್ರಮಕೈಗೊಳ್ಳಲಾಗುವುದೇ?*